# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರ ಸಚಿವಾಲಯದ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಡಾ: ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಸಂಸ್ಥೆಯನ್ನು ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ವರ್ಗಾವಣೆ ಮಾಡುವ ಕುರಿತು.

ಓದಲಾಗಿದೆ: ದಿನಾಂಕ: 1-12-2011 ರಂದು ನಡೆದ ಸಚಿವ ಸಂಪುಟದ ಸಭೆಯ ನಡವಳಿಗಳು (ಪ್ರಕರಣ ಸಂಖ್ಯೆ: ಸಿ:599/2011).

2658
15/12/11

* * *

**ಪ್ರಸ್ತಾವನೆ:**

ಕರ್ನಾಟಕ ರಾಜ್ಯದಲ್ಲಿ ಚರ್ಮೋದ್ಯಮ ಬೆಳವಣಿಗೆ ಮತ್ತು ಪರಿಶಿಷ್ಟ ಜಾತಿಯ ಚಮ್ಮಾರ, ಸಮಗಾರ, ದಂಡೋರಾ ಮತ್ತು ಇತರೆ ಸಾಂಪ್ರದಾಯಿಕ ಚರ್ಮ ಕುಶಲಕರ್ಮಿಗಳ ಶ್ರೇಯೋಭಿವೃದ್ಧಿಗಾಗಿ ಹಾಗೂ ಅವರ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ 1976ರಲ್ಲಿ ಸ್ಥಾಪಿಸಿತು. ನಿಗಮವು ಚರ್ಮೋತ್ಪನ್ನಗಳನ್ನು "ಲಿಡ್‌ಕರ್" ಬ್ರಾಂಡ್ ನೇಮ್ ಅಡಿ ಮಾರಾಟ ಮಾಡುತ್ತಿದೆ. ಸರ್ಕಾರದ ಆದೇಶ ಸಂಖ್ಯೆ: ಸಿಐ 27 ಸಪ್ರಕ್ಯ 2009 ದಿನಾಂಕ: 20-11-2009 ರಲ್ಲಿ ನಿಗಮವನ್ನು "ಡಾ: ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ" ಎಂದು ಮರುನಾಮಕರಣ ಮಾಡಲಾಗಿದೆ.

ಪ್ರಸ್ತುತ ಈ ನಿಗಮವು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವ್ಯಾಪ್ತಿಗೊಳಪಟ್ಟಿದ್ದು, ಚರ್ಮ ಉದ್ಯಮದ ಪ್ರವರ್ಧನೆಗಾಗಿ ಸರ್ಕಾರದ ವಿವಿಧ ಯೋಜನೆಗಳನ್ನು ಈ ನಿಗಮದ ಮೂಲಕ ಕಾರ್ಯರೂಪಕ್ಕೆ ತರಲಾಗುತ್ತದೆ. ಈ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅನುದಾನದ ಕೊರತೆ ಹಾಗೂ ಆಡಳಿತಾತ್ಮಕ ತೊಂದರೆಗಳಿಂದ ಸಾಧ್ಯವಾಗುತ್ತಿಲ್ಲ. ಪ್ರಸ್ತುತ ಪರಿಶಿಷ್ಟ ಜಾತಿ ಯೋಜನೆಗಳ ಅಭಿವೃದ್ಧಿಗಾಗಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ರಾಜ್ಯದ ಮತ್ತು ಕೇಂದ್ರದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿರುವುದರಿಂದ ಆಡಳಿತಾತ್ಮಕ ಹಿತದೃಷ್ಟಿಯಿಂದ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿರುವ ಡಾ: ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತವನ್ನು ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೊಳಪಡಿಸಲು ದಿನಾಂಕ: 1-12-2011 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ನಿಗಮವನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಆಡಳಿತ ವ್ಯಾಪ್ತಿಯಿಂದ ಸಮಾಜ ಕಲ್ಯಾಣ ಇಲಾಖೆಯ ಆಡಳಿತ ವ್ಯಾಪ್ತಿಗೆ ವರ್ಗಾಯಿಸಲು ಸಚಿವ ಸಂಪುಟವು ಅನುಮೋದಿಸಿದೆ.

ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 41 ಸಪ್ರಕೈ 2011, ಬೆಂಗಳೂರು, ದಿನಾಂಕ: 15-12-2011**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸಲ್ಪಡುತ್ತಿರುವ "ಡಾ: ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ"ವನ್ನು ಆಸ್ತಿ ಹೊಣೆಗಾರಿಕೆ ಹಾಗೂ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಹಿತ ತತ್‌ಕ್ಷಣದಿಂದ ಜಾರಿಗೆ ಬರುವಂತೆ ಸಮಾಜ ಕಲ್ಯಾಣ ಇಲಾಖೆಯ ಆಡಳಿತ ವ್ಯಾಪ್ತಿಗೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

[ಕೆ.ಆರ್. ಚಂದ್ರಮ್ಮ]
ಪೀಠಾಧಿಕಾರಿ [ಸಪ್ರಕೈ],
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು.

**ಪ್ರತಿ:**

[1] ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
[2] ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
[3] ಕಾರ್ಯದರ್ಶಿಯವರು, ಸಚಿವ ಸಂಪುಟ, ವಿಧಾನಸೌಧ, ಬೆಂಗಳೂರು.
[4] ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು.
[5] ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಆರ್ಥಿಕ ಇಲಾಖೆ.
[6] ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು, ರಾಜಭವನ, ಬೆಂಗಳೂರು.
[7] ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
[8] ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ವಿಧಾನ ಮಂಡಲ.
[9] ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು.
[10] ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
[11] ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
[12] ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
[13] ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
[14] ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
[15] ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು.
[16] ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

[17] ನಿರ್ದೇಶಕರು, ಪಿಂಚಣಿ, ಸಣ್ಣ ಉಳಿತಾಯ ಮತ್ತು ಆಸ್ತಿ-ಋಣ ನಿರ್ವಹಣೆ ಇಲಾಖೆ. ವಿಶ್ವೇಶ್ವರಯ್ಯ ಕೇಂದ್ರ, ಒಂದನೇ ಅಂತಸ್ತು, ಡಾ: ಬಿ.ಆರ್. ಅಂಬೇಡ್ಕರ್ ರಸ್ತೆ, ಬೆಂಗಳೂರು.

[18] ಎಲ್ಲಾ ಇಲಾಖಾ ಮುಖ್ಯಸ್ಥರು.

[19] ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ಪೀಠಾಧಿಕಾರಿ/ಶಾಖಾಧಿಕಾರಿಗಳು

[20] ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು-1.

[21] ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು-1.

[22] ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.